ತಾಲ್ಲೂಕುವಾರು ಹುದ್ದೆಗಳ ವಿವರ ಹೀಗಿದೆ.

1)	ರಾಯಚೂರು	-	53.
2)	ಮಾನ್ವಿ	-	72
3)	ಸಿಂಧನೂರು	-	67
4)	ಗಂಗಾಪತಿ	-	93
5)	ಕೊಪ್ಪಳ	-	71
6)	ಯಲಬುರ್ಗಾ	-	48
7)	ಕುಷ್ಟಗಿ	-	46
8)	ಲಿಂಗಸಗೂರು	-	60
9)	ದೇವದುರ್ಗ	-	53

ಆ) ದಿನಾಂಕ : 31-5-95ರ ಅಂತ್ಯದವರೆಗೆ ಖಾಲಿ ಇರುವ ಹುದ್ದೆಗಳ ಪೈಕಿ ಶೇಕಡ 50ರಷ್ಟನ್ನು ವಿಶೇಷ ನೇಮಕಾತಿ ಮೂಲಕ (29 ವರ್ಷಗಳ ವಯೋಮಿತಿ ಮೀರಿದವರಿಂದ) ಹಾಗೂ ಉಳಿದ ಹುದ್ದೆಗಳನ್ನು ಸಾಮಾನ್ಯ ನೇಮಕಾತಿ ಮೂಲಕ ತುಂಬಲಾಗುವುದು. ಈ ದಿಸೆಯಲ್ಲಿ ಈಗಾಗಲೇ ವಿಶೇಷ ನೇಮಕಾತಿಗೆ ಕರಡು ಅಧಿಸೂಚನೆ ಹೊರಡಿಸಿದ್ದು, ಅದರನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಶಿಕ್ಷಕರು ನೇಮಕಾತಿಯಲ್ಲಿ ದೈಹಿಕ ಶಿಕ್ಷಕರಿಗೆ ಆದ್ಯತೆ.

406 - ಶ್ರೀ ಕೆ. ವಿರೂಪಾಕ್ಷಪ್ಪ (ಸಿಂಧನೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಶಾಲಾ ಶಿಕ್ಷಕರನ್ನು ಆಯ್ಕೆ ಗೊಳಿಸುವಾಗ್ಗೆ ದೈಹಿಕ ಶಿಕ್ಷಕರಿಗೆ ಆಧ್ಯತೆಗಳನ್ನು ನೀಡಲಾಗುವುದೇ?

ಆ) ಈ ಕುರಿತು, ನಿರುದ್ಯೋಗಿ ದೈಹಿಕ ಶಿಕ್ಷಕರು ಧರಣಿ ನಡೆಸಿರುವ ವಿಚಾರ ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಈ) ನೇಮಕಾತಿಯಲ್ಲಿ ಎಷ್ಟು ಹುದ್ದೆಯನ್ನು ದೈಹಿಕ ಶಿಕ್ಷಕರಿಗೆ ನೀಡಲಾಗುವುದು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಶಾಲಾ ಶಿಕ್ಷಕರನ್ನು ಆಯ್ಕೆಗೊಳಿಸುವಾಗ್ಗೆ, ದೈಹಿಕ ಶಿಕ್ಷಕರಿಗೆ ನಿಗಧಿಪಡಿಸಿರುವಷ್ಟು ಹುದ್ದೆಗಳನ್ನು ಆದ್ಯತೆಯ ಮೇರೆಗೆ ಅವರಿಂದಲೇ ತುಂಬಲಾಗುವುದು.

ಆ) ಬಂದಿದೆ.

ಇ) 1 ರಿಂದ 7 ತರಗತಿಗಳನ್ನು ಹೊಂದಿರುವ 1 ಶಿಕ್ಷಕರ ಹುದ್ದೆ ಮಂಜೂರಾಗಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 1 ನೇ ಹುದ್ದೆಯನ್ನು ದೈಹಿಕ ಶಿಕ್ಷಕರಾಗಿ ಪರಿವರ್ತಿತಲು ಅವಕಾಶವಿದೆ. ಆದರನ್ವಯ, ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಈ) ಹಾಲಿ ಇರುವ 849 ಹಾಗೂ 7 ಶಿಕ್ಷಕರಿರುವ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ, 7ನೇ ಹುದ್ದೆಯನ್ನು ದೈಹಿಕ ಶಿಕ್ಷಕರಾಗಿ ಪರಿವರ್ತಿಸಬೇಕಾಗಿರುವ 691 ಹುದ್ದೆಗಳನ್ನು ಮುಂದಿನ ನೇಮಕಾತಿಯಲ್ಲಿ ಭರ್ತಿ ಮಾಡಲಾಗುವುದು.

ರಾಯಚೂರು ಜಿಲ್ಲೆಯ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ

407 - ಶ್ರೀ ಕೆ. ವಿರೂಪಾಕ್ಷಪ್ಪ, (ಸಿಂಧನೂರು) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯಲ್ಲಿನ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರುಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

ಆ) ಈ ಹುದ್ದೆಗಳನ್ನು ಯಾವಾಗ ಭರ್ತಿಮಾಡಲಾಗುವುದು.

ಇ) ವೈದ್ಯರುಗಳ ಕೊರತೆ ನೀಗಿಸಲು ಸರ್ಕಾರದವರು ಕೈಗೊಂಡಿರುವ ಕ್ರಮವೇನು?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಯಚೂರು ಜಿಲ್ಲೆಯಲ್ಲಿ ಒಟ್ಟು 41 ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇದ್ದು ಇವುಗಳ ಪೈಕಿ ಕೆಲವು ವೈದ್ಯಾಧಿಕಾರಿಗಳನ್ನು ಸಾಮಾನ್ಯ ವರ್ಗಾವಣೆಯಲ್ಲಿ ನೇಮಕ ಮಾಡಲಾಗಿದೆ. ಹಾಗೂ ಕೆಲವು ವೈದ್ಯರುಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದ್ದು, ಅವರುಗಳು ಇನ್ನೂ ಕರ್ತವ್ಯಕ್ಕೆ ಹಾಜರಾಗಬೇಕಾಗಿದೆ (ಖಾಲಿ ಇರುವ ತಾಲ್ಲೂಕುವಾರು ಹುದ್ದೆಗಳ ಮಾಹಿತಿಯನ್ನು ಪ್ರತ್ಯೇಕವಾಗಿ ಲಗತ್ತಿಸಿದೆ).

ಆ) ಸೇವಾ ನಿರತ ಸ್ನಾತಕೋತ್ತರ ವಿದ್ಯಾಭ್ಯಾಸದಿಂದ ಹಿಂದಿರುಗುವ ವೈದ್ಯರುಗಳು ಹಾಗೂ ಗುತ್ತಿಗೆ ಆಧಾರದ ಮೇಲೆ ನೇಮಕಾತಿಯ ಸಂದರ್ಭದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಹಾಗೂ ಕರ್ನಾಟಕಕ ಲೋಕಸೇವಾ ಆಯೋಗದಿಂದ ರಾಜ್ಯದ ಎಲ್ಲಾ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.